ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

ಸಂಖ್ಯೆ: ಕಾಶಿಇ/ಮಾತಂವಿ/27/ಲ್ಯಾಪ್‌ಟಾಪ್/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 13.10.2017

## ಸುತ್ತೋಲೆ

ವಿಷಯ : ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾ/ಪ.ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಇ-ಕಂಟೆಂಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 4 ಹೆಚ್‌ಪಿಸಿ 2017, ಬೆಂಗಳೂರು ದಿ. 18/02/2017, 21/03/2017, 27/03/2017.
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಕಾಶಿಇ/ಮಾತಂವಿ/42/ಲ್ಯಾಪ್‌ಟಾಪ್/16-17 ದಿನಾಂಕ:04/04/2017, 05/08/2017, 11/10/2017

>>><<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ, ಕುಟುಂಬದ ವಾರ್ಷಿಕ ವರಮಾನ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಇ-ಕಂಟೆಂಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಸಂಬಂಧದಲ್ಲಿ ದಿ.16/10/2017ರಂದು ಬೆಳಗ್ಗೆ 9.00 ಗಂಟೆಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲಾ ಪ್ರಾಂಶುಪಾಲರುಗಳಿಗೆ ಮಾಹಿತಿಯನ್ನು ನೀಡಲಾಗುತ್ತಿದ್ದು, ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ತಮ್ಮ ಕಾಲೇಜುಗಳ ಮಾಹಿತಿ ತಂತ್ರಜ್ಞಾನ ಸಂಯೋಜಕರು ಮತ್ತು ನ್ಯಾಕ್ ಸಂಯೋಜಕರುಗಳೊಂದಿಗೆ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿರುವ KSWAN Video Conference Facility ಮೂಲಕ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗವಹಿಸುವಂತೆ ಸೂಚಿಸಲಾಗಿದೆ. ಸದರಿ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಕೂಡಾ ಭಾಗವಹಿಸತಕ್ಕದ್ದು.

13/10/17

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ,

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಗುಲ್ಬರ್ಗಾ- ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ
2. ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು,

1. ಕಾಲೇಜು ಶಿಕ್ಷಣ ಆಯುಕ್ತರ/ನಿರ್ದೇಶಕರ/ಮುಖ್ಯ ಆಡಳಿತಾಧಿಕಾರಿಗಳ/ಹೆಚ್ಚುವರಿ ನಿರ್ದೇಶಕರ ಆಪ್ತ ಶಾಖೆಗೆ-ಮಾಹಿತಿಗಾಗಿ
2. ಕಛೇರಿ ಪ್ರತಿ.

NO. 1, 2nd Floor, DTE Building, Palace Road, Bangalore - 560 001
Phone: 080 2226 3327, Fax: 080 2228 3758, email: bngcce@kar.nic.in